# All India Radio: Bangalore
# National Bulletin In Kannada
# 06.04.2024: 07.35AM
# ಆಕಾಶವಾಣಿ, ಬೆಂಗಳೂರು
# ರಾಷ್ಟ್ರೀಯ ವಾರ್ತೆಗಳು

******

ಮುಖ್ಯಾಂಶಗಳು:

- ರಾಷ್ಟ್ರದ ಭವಿಷ್ಯಕ್ಕಾಗಿ ಸಾರ್ವಜನಿಕ ಸೇವೆಯ ಬಗ್ಗೆ ಶ್ರೇಷ್ಠತೆ, ಸಮಗ್ರತೆ, ಬದ್ಧತೆ ಮೈಗೂಡಿಸಿಕೊಳ್ಳಲು ಉಪರಾಷ್ಟ್ರಪತಿ ಜಗದೀಪ್ ಧನಕರ್ ಕರೆ
- ಲೋಕಸಭಾ ಚುನಾವಣೆ; ಉತ್ತರಪ್ರದೇಶ, ರಾಜಸ್ತಾನಗಳಲ್ಲಿಂದು ಸಾರ್ವಜನಿಕ ರ್‍ಯಾಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ; ಕಾಂಗ್ರೆಸ್ ನಾಯಕರಿಂದಲೂ ಜೈಪುರದಲ್ಲಿ ಚುನಾವಣಾ ಪ್ರಚಾರ
- ಕರ್ನಾಟಕದಲ್ಲಿ ಇದೇ ೨೬ರಂದು ಮೊದಲ ಹಂತದ ಲೋಕಸಭಾ ಚುನಾವಣೆಗೆ ೩೮೪ ನಾಮಪತ್ರಗಳು ಕ್ರಮಬದ್ಧ; ೬೦ ತಿರಸ್ಕೃತ
- ಐಪಿಎಲ್ ಟಿ-೨೦ ಕ್ರಿಕೆಟ್: ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್ ತಂಡಕ್ಕೆ ೬ ವಿಕೆಟ್‌ಗಳ ಜಯ

*****

ಉತ್ತರಾಖಂಡನ ಮಸ್ಸೂರಿಯಲ್ಲಿರುವ ಆಡಳಿತಾಧಿಕಾರಿಗಳ ಲಾಲ್ ಬಹದ್ದೂರ್ ಶಾಸ್ತ್ರಿ ರಾಷ್ಟ್ರೀಯ ಅಕಾಡೆಮಿಯಲ್ಲಿ ನಿನ್ನೆ ನಡೆದ ೨೦೨೩ನೇ ಬ್ಯಾಚ್‌ನ ಐಎಎಸ್ ಅಧಿಕಾರಿಗಳ ತರಬೇತುದಾರರ ಸಮಾರೋಪ ಸಮಾರಂಭದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನಕರ್ ಭಾಗವಹಿಸಿದ್ದರು. ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರದ ಭವಿಷ್ಯವನ್ನು ರೂಪಿಸುವಲ್ಲಿ ಮಹತ್ವದ ಜವಾಬ್ದಾರಿಯಾಗಿರುವ ಸಾರ್ವಜನಿಕ ಸೇವೆಯ ಬಗ್ಗೆ ಶ್ರೇಷ್ಠತೆ, ಸಮಗ್ರತೆ ಹಾಗೂ ಬದ್ಧತೆಯನ್ನು ಮೈಗೂಡಿಸಿಕೊಳ್ಳುವಂತೆ ಪ್ರಶಿಕ್ಷಣಾರ್ಥಿ ಅಧಿಕಾರಿಗಳಿಗೆ ಕರೆ ನೀಡಿದರು. ಪೌರತ್ವ ತಿದ್ದುಪಡಿ ಕಾಯ್ದೆ ಕುರಿತು ಮಾತನಾಡಿದ ಉಪರಾಷ್ಟ್ರಪತಿ, ಈ ಕಾನೂನು ವ್ಯಕ್ತಿಯ ಪೌರತ್ವವನ್ನು ಕಸಿದುಕೊಳ್ಳುವುದಿಲ್ಲ. ಆದರೆ ಇದು ನೆರೆಯ ದೇಶಗಳ ಕಿರುಕುಳಕ್ಕೊಳಗಾದ ಧಾರ್ಮಿಕ ಅಲ್ಪಸಂಖ್ಯಾತರಿಗೆ ನೆರವು ಕಲ್ಪಿಸುತ್ತದೆ. ಎಂದು ಹೇಳಿದರು.

*****

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಪಕ್ಷದ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಳಗ್ಗೆ ಉತ್ತರಪ್ರದೇಶದ ಸಹರಾನಪುರದಲ್ಲಿ ಸಾರ್ವಜನಿಕ ರ್‍ಯಾಲಿ ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ಬಳಿಕ ಮಧ್ಯಾಹ್ನ ಪ್ರಧಾನಿ, ರಾಜಸ್ಥಾನದ ಅಜ್ಮೇರ್‌ನಲ್ಲಿ ನಡೆಯಲಿರುವ ಚುನಾವಣಾ ರ್‍ಯಾಲಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ತದನಂತರ ಸಂಜೆ ಘಾಜಿಯಾಬಾದ್‌ನಲ್ಲಿ ನಡೆಯಲಿರುವ ರೋಡ್ ಶೋನಲ್ಲಿ ಭಾಗವಹಿಸಲಿದ್ದಾರೆ.

ನಿನ್ನೆ ಪ್ರಧಾನಿ ನರೇಂದ್ರ ಮೋದಿ ಅವರು ರಾಜಸ್ಥಾನದ ಚುರುವಿನಲ್ಲಿ ಬಿಜೆಪಿ ಅಭ್ಯರ್ಥಿಗಳ ಪರ ರೋಡ್ ಶೋ ನಡೆಸಿದರು. ಬಳಿಕ ನಡೆದ ಬೃಹತ್ ಜನಸಭೆ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ಹತ್ತು ವರ್ಷಗಳಲ್ಲಿ ಕ್ಷಿಪ್ರಗತಿಯಲ್ಲಿ ದೇಶದ ಅಭಿವೃದ್ಧಿಯಾಗಿದ್ದು, ಜನರ ಜೀವನಮಟ್ಟದಲ್ಲಿ ಹೆಚ್ಚಿನ ಸುಧಾರಣೆಯಾಗಿದೆ ಎಂದರು. ಬಡವರಿಗೆ ಗುಣಮಟ್ಟದ ಮನೆಗಳನ್ನು ಒದಗಿಸಲಾಗಿದ್ದು, ಜಲಜೀವನ ಮಿಷನ್ ಯೋಜನೆಯಡಿ ಕೊಳವೆ ಮೂಲಕ ಶುದ್ಧ ಕುಡಿಯುವ ನೀರು ಪೂರೈಸಲಾಗುತ್ತಿದೆ ಎಂದು ತಿಳಿಸಿದರು. ಮತ್ತೊಂದೆಡೆ ಕಾಂಗ್ರೆಸ್ ನಾಯಕರೂ ಕೂಡ ಇಂದು ವಿವಿಧೆಡೆಗಳಲ್ಲಿ ಚುನಾವಣಾ ಪ್ರಚಾರದಲ್ಲಿ ಪಾಲ್ಗೊಳ್ಳಲಿದ್ದಾರೆ. ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಪಕ್ಷದ ಹಿರಿಯ ನಾಯಕರಾದ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರು ಜೈಪುರದಲ್ಲಿ ನಡೆಯಲಿರುವ ಸಾರ್ವಜನಿಕ ರ್‍ಯಾಲಿಯಲ್ಲಿ ಪಾಲ್ಗೊಳ್ಳಲಿದ್ದಾರೆ.

*****

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಕೇಂದ್ರೀಯ ಚುನಾವಣಾ ಸಮಿತಿ ಸಭೆ ನವದೆಹಲಿಯಲ್ಲಿರುವ ಪಕ್ಷದ ಕೇಂದ್ರ ಕಚೇರಿಯಲ್ಲಿ ನಿನ್ನೆ ಸಂಜೆ ನಡೆಯಿತು. ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷರಾದ ಸೋನಿಯಾ ಗಾಂಧಿ, ಪಕ್ಷದ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಹಾಗೂ ಹರಿಯಾಣದ ಕಾಂಗ್ರೆಸ್‌ನ ಹಿರಿಯ ನಾಯಕರು ಸಭೆಯಲ್ಲಿ ಪಾಲ್ಗೊಂಡಿದ್ದರು.

*****

ಕೇರಳದಲ್ಲಿ ಲೋಕಸಭಾ ಚುನಾವಣೆಗೆ ಒಟ್ಟು ಸಲ್ಲಿಕೆಯಾಗಿದ್ದ ನಾಮಪತ್ರಗಳ ಪೈಕಿ ೨೦೪ ಅಭ್ಯರ್ಥಿಗಳ ನಾಮಪತ್ರಗಳು ಕ್ರಮಬದ್ಧವಾಗಿವೆ. ನಾಮಪತ್ರ ಪರಿಶೀಲನೆ ಕಾರ್ಯ ನಿನ್ನೆ ನಡೆಯಿತು. ೮೬ ಅಭ್ಯರ್ಥಿಗಳ ನಾಮಪತ್ರಗಳು ತಿರಸ್ಕೃತಗೊಂಡಿವೆ ಎಂದು ಆ ರಾಜ್ಯದ ಮುಖ್ಯ ಚುನಾವಣಾಧಿಕಾರಿ ಸಂಜಯ್ ಕೌಲ್ ತಿಳಿಸಿದ್ದಾರೆ. ನಾಡಿದ್ದು ಸೋಮವಾರ ನಾಮಪತ್ರಗಳನ್ನು ವಾಪಸ್ ಪಡೆಯಲು ಕೊನೆಯ ದಿನವಾಗಿದೆ. ಕೇರಳ ರಾಜ್ಯದಲ್ಲಿ ಇದೇ ೨೬ರಂದು ಚುನಾವಣೆ ನಿಗದಿಯಾಗಿದೆ.

*****

ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ನಿನ್ನೆ ಕರ್ನಾಟಕ ರಾಜ್ಯದ ಕಲಘಟಗಿ ವಿಧಾನಸಭಾ ಕ್ಷೇತ್ರದಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು, ಘೋಷಿಸಿದಂತೆ ಇಂದಿಗೂ ೬ ಸಾವಿರ ರೂಪಾಯಿ ಕಿಸಾನ್ ಸಮ್ಮಾನ್ ನಿಧಿಯನ್ನು ನೇರವಾಗಿ ರೈತರ ಖಾತೆಗೆ ಜಮೆ ಮಾಡಲಾಗುತ್ತಿದೆ. ಆದರೆ ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ಇದನ್ನು ಸ್ಥಗಿತಗೊಳಿಸಿದೆ ಎಂದು ದೂರಿದರು. ಕಾಂಗ್ರೆಸ್ ಪಕ್ಷ ಎಂದೂ ದೇಶದ ಹಿತದ ಬಗ್ಗೆ ಚಿಂತಿಸಿಲ್ಲ, ಬದಲಿಗೆ ತುಷ್ಟೀಕರಣದ ರಾಜಕಾರಣ, ಭಯೋತ್ಪಾದನೆಗೆ ಕುಮ್ಮಕ್ಕು ನೀಡುತ್ತಾ ಬಂದಿದೆ ಎಂದು ಪ್ರಲ್ಹಾದ್ ಜೋಶಿ ಟೀಕಿಸಿದರು.

*****

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿಯು, ರಾಷ್ಟ್ರೀಯ ಶಿಕ್ಷಣ ನೀತಿ-೨೦೨೦ಕ್ಕೆ ಅನುಗುಣವಾಗಿ ಮೌಲ್ಯಮಾಪನ ಮತ್ತು ಮೌಲ್ಯಮಾಪನದಲ್ಲಿ ಬದಲಾವಣೆಗಳನ್ನು ಪರಿಚಯಿಸಿದೆ. ಹೊಸ ಸ್ವರೂಪವು ಈಗ ಹೆಚ್ಚು ಸಾಮರ್ಥ್ಯ ಆಧಾರಿತ ಪ್ರಶ್ನೆಗಳು ಮತ್ತು ಕಡಿಮೆ ನಿರ್ಮಿತ ಪ್ರತಿಕ್ರಿಯೆ ಪ್ರಶ್ನೆಗಳನ್ನು ಆಧರಿಸಿಸುತ್ತದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ, ೧೧ ಮತ್ತು ೧೨ ನೇ ತರಗತಿಯಲ್ಲಿ ಬಹು ಆಯ್ಕೆ ಪ್ರಶ್ನೆಗಳು ಅಥವಾ ಪ್ರಕರಣ ಆಧಾರಿತ ಪ್ರಶ್ನೆಗಳು, ಮೂಲ ಆಧಾರಿತ ಸಂಯೋಜಿತ ಪ್ರಶ್ನೆಗಳು ಅಥವಾ ಇತರ ಯಾವುದೇ ರೀತಿಯ ಸಾಮರ್ಥ್ಯ ಕೇಂದ್ರಿತ ಪ್ರಶ್ನೆಗಳನ್ನು ಶೇಕಡಾ ೪೦ ರಿಂದ ೫೦ ಕ್ಕೆ ಹೆಚ್ಚಿಸಲಾಗಿದೆ. ಮತ್ತೊಂದೆಡೆ, ಅಸ್ತಿತ್ವದಲ್ಲಿರುವ ಮಾದರಿಗೆ ಅನುಗುಣವಾಗಿ ಕಿರು ಉತ್ತರ ಪ್ರಶ್ನೆಗಳು ಮತ್ತು ದೀರ್ಘ ಉತ್ತರ ಪ್ರಕಾರದ ಪ್ರಶ್ನೆಗಳು ಸೇರಿದಂತೆ ನಿರ್ಮಿತ ಪ್ರತಿಕ್ರಿಯೆ ಪ್ರಶ್ನೆಗಳನ್ನು ೨೦೨೪-೨೫ರ ಶೈಕ್ಷಣಿಕ ಅಧಿವೇಶನಗಳಲ್ಲಿ ಶೇಕಡಾ ೪೦ ರಿಂದ ೩೦ ಕ್ಕೆ ತಗ್ಗಿಸಲಾಗಿದೆ. ಆದಾಗ್ಯೂ, ೨೦೨೪-೨೫ರ ಹೊಸ ಶೈಕ್ಷಣಿಕ ಅಧಿವೇಶನಕ್ಕಾಗಿ ೯ ಮತ್ತು ೧೦ ನೇ ತರಗತಿಗಳ ವರ್ಷಾಂತ್ಯದ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳ ಸಂಯೋಜನೆಯಲ್ಲಿ ಯಾವುದೇ ಬದಲಾವಣೆಗಳನ್ನು ಮಾಡಲಾಗಿಲ್ಲ.

*****

ಕರ್ನಾಟಕ ರಾಜ್ಯದಲ್ಲಿ ಇದೇ ೨೬ರಂದು ನಡೆಯಲಿರುವ ಮೊದಲ ಹಂತದ ಲೋಕಸಭಾ ಚುನಾವಣೆಯ ನಾಮಪತ್ರಗಳ ಪರಿಶೀಲನೆ ಕಾರ್ಯ ನಿನ್ನೆ ಪೂರ್ಣಗೊಂಡಿತು. ಈ ಹಂತದಲ್ಲಿ ಚುನಾವಣೆ ನಡೆಯಲಿರುವ ಒಟ್ಟು ೧೪ ಕ್ಷೇತ್ರಗಳಿಂದ ೩೫೮ ಅಭ್ಯರ್ಥಿಗಳಿಂದ ೪೯೨ ನಾಮಪತ್ರಗಳು ಸಲ್ಲಿಕೆಯಾಗಿದ್ದವು. ಈ ಪೈಕಿ ೩೮೪ ನಾಮಪತ್ರಗಳು ಕ್ರಮಬದ್ಧವಾಗಿದ್ದು, ೬೦ ನಾಮಪತ್ರಗಳು ತಿರಸ್ಕೃತಗೊಂಡಿವೆ ಎಂದು ಮುಖ್ಯ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನಾಡಿದ್ದು ಸೋಮವಾರ ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದ್ದು, ಆ ಬಳಿಕ ಅಂತಿಮವಾಗಿ ಚುನಾವಣಾ ಕಣದಲ್ಲಿ ಉಳಿಯುವ ಅಭ್ಯರ್ಥಿಗಳ ಸ್ಪಷ್ಟ ಚಿತ್ರಣ ಸಿಗಲಿದೆ.

*****

ಮುಂಬರುವ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಎಲ್ಲ ರಾಜ್ಯಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಲಡಾಖ್‌ನಲ್ಲಿ ಸಾರ್ವಜನಿಕ ಶಾಂತಿ ಮತ್ತು ಭದ್ರತೆಯನ್ನು ಕಾಪಾಡಲು ನೆನ್ನೆಯಿಂದ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಹಾಗಾಗಿ ಲೇಹ್ ಜಿಲ್ಲೆಯಾದ್ಯಂತ ಯಾವುದೇ ಮೆರವಣಿಗೆ, ರ್‍ಯಾಲಿ ಅಥವಾ ಪಥಸಂಚಲನ ಕೈಗೊಳ್ಳಲು ಜಿಲ್ಲಾ ನ್ಯಾಯಾಲಯದ ಮೂಲಕ ಲಿಖಿತ ಪರವಾನಗಿ ಪಡೆಯಬೇಕಾಗುತ್ತದೆ. ಚುನಾವಣಾ ನೀತಿ ಸಂಹಿತೆಗೆ ವಿರುದ್ಧವಾಗಿ, ಸಾಮಾಜಿಕ ಸಾಮರಸ್ಯ, ಸಾರ್ವಜನಿಕ ಶಾಂತಿ ಕದಡುವಂತಹ ಯಾವುದೇ ಹೇಳಿಕೆಗಳನ್ನು ನೀಡಬಾರದು ಎಂದು ನಿರ್ದೇಶನ ನೀಡಲಾಗಿದೆ. ಇದೇ ವೇಳೆ ೧೫ ಲಕ್ಷ ಇವಿಎಂ ಮಷಿನ್‌ಗಳು ಕಾಣೆಯಾಗಿವೆ ಎಂದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ಸುದ್ದಿಯನ್ನು ಭಾರತೀಯ ಚುನಾವಣಾ ಆಯೋಗ ಅಲ್ಲಗಳೆದಿದೆ. ಇದು ಸುಳ್ಳು ಸುದ್ದಿ, ಇದರ ಮೂಲಕ ದಾರಿ ತಪ್ಪಿಸುವ ಕೆಲಸ ಮಾಡಲಾಗುತ್ತಿದೆ ಎಂದು ಆಯೋಗ ಹೇಳಿದೆ.

ಇಷ್ಟೇ ಅಲ್ಲದೆ ಸರ್ವೋಚ್ಚ ನ್ಯಾಯಾಲಯ ಕೂಡ ಇವಿಎಂ ಕಾಣೆಯಾಗಿರುವ ಅರ್ಜಿಯನ್ನು ವಜಾಗೊಳಿಸಿದೆ, ಜನರು ಸುಳ್ಳು ವದಂತಿಗಳಿಗೆ ಕಿವಿಗೊಡದೆ ಅಧಿಕೃತ ಮಾಹಿತಿಗಾಗಿ ಆಯೋಗದ ಜಾಲತಾಣಕ್ಕೆ ಭೇಟಿ ನೀಡಬಹುದು ಎಂದು ತಿಳಿಸಿದೆ.

*****

ಹೈದರಾಬಾದ್‌ನಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ ೬ ವಿಕೆಟ್‌ಗಳಿಂದ ಚೆನ್ನೈ ಸೂಪರ್ ಕಿಂಗ್ಸ್ ತಂಡದ ವಿರುದ್ಧ ಸುಲಭ ಜಯ ಗಳಿಸಿತು. ಮೊದಲು ಬ್ಯಾಟ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್, ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೬೫ ರನ್ ಗಳಿಸಿತು. ಶಿವಮ್ ದುಭೆ ೨೪ ಎಸೆತಗಳಲ್ಲಿ ೪೫ ರನ್‌ಗಳಿಸಿ, ಚೆನ್ನೈಗೆ ಉತ್ತಮ ಮೊತ್ತ ತಂದುಕೊಟ್ಟರು. ಉತ್ತರವಾಗಿ ೧೬೬ ರನ್‌ಗಳ ಗುರಿ ಬೆನ್ನತ್ತಿದ ಸನ್‌ರೈಸರ್ಸ್ ಹೈದರಾಬಾದ್, ಇನ್ನೂ ೧೧ ಎಸೆಗಳು ಬಾಕಿ ಇರುವಂತೆಯೇ ೪ ವಿಕೆಟ್ ಕಳೆದುಕೊಂಡು ವಿಜಯೋತ್ಸವ ಆಚರಿಸಿತು. ಅಭಿಷೇಕ್ ಶರ್ಮಾ ಕೇವಲ ೧೨ ಎಸೆತಗಳಲ್ಲಿ ೩೭ ರನ್ ಹಾಗೂ ಎಡನ್ ಮಾರ್ಕರಮ್ ೩೬ ಎಸೆತಗಳಲ್ಲಿ ೫೦ ರನ್‌ಗಳಿಸಿ, ಹೈದರಾಬಾದ್ ತಂಡಕ್ಕೆ ನಿರೀಕ್ಷಿತ ಗೆಲುವು ತಂದುಕೊಟ್ಟರು. ಇಂದು ಜೈಪುರದಲ್ಲಿ ನಡೆಯಲಿರುವ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

*****

ಆಸ್ಟ್ರೇಲಿಯಾದ ಪರ್ತ್‌ನಲ್ಲಿ ಇಂದಿನಿಂದ ಭಾರತ ಮತ್ತು ಆಸ್ಟ್ರೇಲಿಯಾ ತಂಡಗಳ ನಡುವೆ ಐದು ಪಂದ್ಯಗಳ ಹಾಕಿ ಟೆಸ್ಟ್ ಸರಣಿ ಆರಂಭವಾಗಲಿದೆ. ಆತಿಥೇಯ ತಂಡದ ಸವಾಲನ್ನು ಸಮರ್ಥವಾಗಿ ಎದುರಿಸಲು ಭಾರತ ತಂಡದ ಆಟಗಾರರು ಎದುರು ನೋಡುತ್ತಿದ್ದಾರೆ. ಇಂದು ಮೊದಲ ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೨ ಗಂಟೆಗೆ ಆರಂಭವಾಗಲಿದೆ. ಪ್ಯಾರಿಸ್ ಒಲಿಂಪಿಕ್ಸ್‌ಗೆ ಮುನ್ನ ತಮ್ಮ ಸಾಮರ್ಥ್ಯವನ್ನು ಖಚಿತಪಡಿಸಿಕೊಳ್ಳಲು ಭಾರತದ ಆಟಗಾರರಿಗೆ ಈ ಸರಣಿ ಉತ್ತಮ ವೇದಿಕೆಯಾಗಿದೆ. ಮುಂಬರುವ ಪ್ರತಿಷ್ಠಿತ ಒಲಿಂಪಿಕ್ಸ್ ಕೂಟಕ್ಕೆ ನಾವು ಉತ್ತಮ ಫಾರ್ಮ್‌ನಲ್ಲಿದ್ದೇವೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಹಾಗೂ ನಮ್ಮ ಕಾರ್ಯತಂತ್ರಗಳನ್ನು ಉತ್ತಮಗೊಳಿಸುವ ಮತ್ತು ಸುಧಾರಣೆ ತಂದುಕೊಳ್ಳುವ ನಿಟ್ಟಿನಲ್ಲಿ ಈ ಸರಣಿಯಲ್ಲಿ ಪ್ರಯತ್ನಿಸಲಿದ್ದೇವೆ ಎಂದು ಭಾರತ ಹಾಕಿ ತಂಡದ ಮುಖ್ಯ ಕೋಚ್ ಕ್ರೇಗ್ ಫುಲ್ಟನ್ ಹೇಳಿದ್ದಾರೆ.

*****

ಕೆನಡಾದ ಟೊರೊಂಟೊದಲ್ಲಿ ಆರಂಭವಾಗಿರುವ ಪ್ರತಿಷ್ಠಿತ ಕ್ಯಾಂಡಿಡೇಟ್ ಚೆಸ್ ಟೂರ್ನಿಯಲ್ಲಿ ಭಾರತದ ಗ್ರ್ಯಾಂಡ್ ಮಾಸ್ಟರ್ ಆರ್. **ಪ್ರಜ್ಞಾನಂದ** ಡ್ರಾ ಫಲಿತಾಂಶದೊಂದಿಗೆ ಅಭಿಯಾನ ಆರಂಭಿಸಿದ್ದಾರೆ. ನಿನ್ನೆ ನಡೆದ ಮೊದಲ ಸುತ್ತಿನಲ್ಲಿ ಪಂದ್ಯದಲ್ಲಿ **ಪ್ರಜ್ಞಾನಂದ,** ಫ್ರಾನ್ಸ್‌ನ ಫಿರೌಜಾ ಅಲಿರೆಜಾ ವಿರುದ್ಧ ಡ್ರಾ ಸಾಧಿಸಿದರು.

ಮತ್ತೊಂದು ಆರಂಭಿಕ ಪಂದ್ಯದಲ್ಲಿ ಭಾರತದ ಡಿ. ಗುಕೇಶ್ ಮತ್ತು ಸ್ವದೇಶಿ ಮಿತ್ರ ವಿದಿತ್ ಗುಜ್ರಾತಿ ಪರಸ್ಪರ ಡ್ರಾಗೆ ತೃಪ್ತಿಪಟ್ಟು ಅಂಕ ಹಂಚಿಕೊಂಡರು.

******